**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 11-09-2017 ರಂದು ಮಧ್ಯಾಹ್ನ 3.00 ಗಂಟೆಗೆ ನಡೆದ ಸಭೆಯ ನಡವಳಿಗಳು

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಕೌನ್ಸಿಲ್ ಕಾರ್ಯದರ್ಶಿಗಳು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಉಪ ಆಯುಕ್ತರು (ದಾಸರಹಳ್ಳಿ) |
| 3. | ಎನ್.ಉಮಾ | – ಸದಸ್ಯರು | ಉಪ ಆಯುಕ್ತರು(ಮಹದೇವಪುರ) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಮುಖ್ಯ ಲೆಕ್ಕಾಧಿಕಾರಿಗಳು |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಎಲ್ಲಾ ವಲಯ ಉಪ ನಿಯಂತ್ರಕರು |
| 6. | ವಿ.ಸುರೇಶ್ | – ಸದಸ್ಯರು | (ಹಣಕಾಸು) |
| 7. | ಹೆಚ್.ಕುಸುಮಾ | – ಸದಸ್ಯರು | ಕೇಂದ್ರ ಸ್ಥಾನಿಕ ಸಹಾಯಕರು(ದಕ್ಷಿಣ) |
| 8. | ಎಂ.ಮಾಲತಿ | – ಸದಸ್ಯರು | |
| 9. | ಎಂ.ಶಾಮಲ | – ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

**01.ವಿಷಯದ ಸಂಖ್ಯೆ : ಲೆಪಸ್ಥಾಸ/ 07/17-18**

ಪಾಲಿಕೆಯಲ್ಲಿ 2017-18ನೇ ಸಾಲಿನಿಂದ ಅನ್ವಯವಾಗುವಂತೆ ಹಣಕಾಸು ಮತ್ತು ಲೆಕ್ಕಪತ್ರ ನಿರ್ವಹಣೆಗೆ ರೂಪಿಸಿರುವ ನೂತನ "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಲೆಕ್ಕಪತ್ರ ಮಾರ್ಗದರ್ಶನಗಳು-2017' ಅನ್ನು ಅಳವಡಿಸಿಕೊಳ್ಳುವ ಬಗ್ಗೆ ಹಾಗೂ ಕೇಂದ್ರಿಕೃತ ಲೆಕ್ಕಪತ್ರ ಕೋಶವನ್ನು ಅಗತ್ಯ ಮೂಲಭೂತ ಸೌಕರ್ಯಗಳು ಮತ್ತು ನುರಿತ ಸಿಬ್ಬಂದಿಗಳೊಂದಿಗೆ ಸ್ಥಾಪನೆ ಮಾಡಲು ಅನುಮೋದನೆ ಕೋರಿ ಲೆಕ್ಕಪತ್ರ ಸ್ಥಾಯಿ ಸಮಿತಿ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:18-08-2017ರ ಟಿಪ್ಪಣಿ

"ಚರ್ಚಿಸಲಾಯಿತು ನಿರ್ಣಯಕ್ಕಾಗಿ ಕಾಯ್ದಿರಿಸಿದೆ"

ಮುಖ್ಯ ಲೆಕ್ಕಾಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸದಸ್ಯರುಗಳು ಹಾಗೂ ಅಧಿಕಾರಿಗಳನ್ನು ಸ್ವಾಗತ್ತಿಸುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯಗಳಿಗೆ ಸಂಬಂಧಿಸಿದಂತೆ ನಿರ್ವಹಿಸುತ್ತಿರುವ ಬ್ಯಾಂಕ್ ಖಾತೆಗಳ ವಿವರಗಳ ಬಗ್ಗೆ ಚರ್ಚಿಸಲು ಸಭೆಯನ್ನು ಆಯೋಜಿಸಿರುವುದಾಗಿ ತಿಳಿಸುತ್ತಾ, ಪ್ರಸ್ತುತ ಕೇಂದ್ರ ಕಛೇರಿಯಲ್ಲಿ ಒಟ್ಟು 34 ಬ್ಯಾಂಕ್ ಖಾತೆಗಳಲ್ಲಿ ವ್ಯವಹರಿಸುತ್ತಿರುವುದಾಗಿ ಮಾಹಿತಿ ನೀಡುತ್ತಾ, ಅಲ್ಲದೆ ಕರೆಂಟ್ ಅಕೌಂಟ್‌ಗಳನ್ನು ಫ್ಲೆಕ್ಸಿ ಅಕೌಂಟ್‌ಗಳನ್ನಾಗಿ ಬದಲಾವಣೆ ಮಾಡಲಾಗಿದ್ದು, ಇದರಿಂದ, ರೂ.53.33ಕೋಟಿ ಬಡ್ಡಿ ಬಂದಿರುವುದಾಗಿ ಸಭೆಗೆ ಮಾಹಿತಿ ನೀಡಿದರು.

Nethra Narayan

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು

ತದ ನಂತರ ಅಧ್ಯಕ್ಷರು ಮಾತನಾಡುತ್ತಾ, ಹಾಜರಿದ್ದ ಎಲ್ಲಾ ವಲಯಗಳ ಉಪ ನಿಯಂತ್ರಕರು (ಹಣಕಾಸು) ರವರುಗಳಿಗೆ ತಮ್ಮ ತಮ್ಮ ವಲಯಕ್ಕೆ ಸಂಬಂಧಿಸಿದಂತೆ ಇರುವ ಒಟ್ಟು ಬ್ಯಾಂಕ್ ಖಾತೆಗಳ ವಿವರಗಳನ್ನು ಸಲ್ಲಿಸಲು ಸೂಚಿಸಿದರು.

ಅದರಂತೆ ಪೂರ್ವ ವಲಯದಲ್ಲಿ 100, ಮಹದೇವಪುರ ವಲಯದಲ್ಲಿ 09, ದಕ್ಷಿಣ ವಲಯದಲ್ಲಿ 61 ಬ್ಯಾಂಕ್ ಖಾತೆಗಳು, ಯಲಹಂಕ ವಲಯದಲ್ಲಿ 10, ಪಶ್ಚಿಮ ವಲಯದಲ್ಲಿ 95 ಬ್ಯಾಂಕ್ ಖಾತೆಗಳು, ದಾಸರಹಳ್ಳಿ ವಲಯದಲ್ಲಿ 09, ಆರ್.ಆರ್.ನಗರ ವಲಯದಲ್ಲಿ 09 ಹಾಗೂ ಬೊಮ್ಮನಹಳ್ಳಿ ವಲಯದಲ್ಲಿ 11 ಬ್ಯಾಂಕ್ ಖಾತೆಗಳು ಇರುವುದಾಗಿ ಸಂಬಂಧಪಟ್ಟ ಉಪ ನಿಯಂತ್ರಕರು (ಹಣಕಾಸು) ರವರುಗಳು ಕ್ರಮವಾಗಿ ಮಾಹಿತಿ ನೀಡಿದರು. ಅಲ್ಲದೆ ಕೆಲವು ಬ್ಯಾಂಕ್ ಖಾತೆಗಳನ್ನು ಈಗಾಗಲೇ ರದ್ದುಗೊಳಿಸಿರುವುದಾಗಿ ಹಾಜರಿದ್ದ ಉಪ ನಿಯಂತ್ರಕರು (ಹಣಕಾಸು) ರವರುಗಳು ಸಭೆಗೆ ಮಾಹಿತಿ ನೀಡಿದಾಗ, ಅಧ್ಯಕ್ಷರು ಈ ಹಿಂದೆ ಇದ್ದ ಒಟ್ಟು ಬ್ಯಾಂಕ್ ಖಾತೆಗಳ ಸಂಖ್ಯೆ, ರದ್ದುಗೊಳಿಸಿರುವ ಬ್ಯಾಂಕ್ ಖಾತೆಗಳ ಸಂಖ್ಯೆ, ರದ್ದುಗೊಳಿಸಿರುವ ದಿನಾಂಕ, ಬ್ಯಾಂಕ್ ಖಾತೆಯನ್ನು ರದ್ದುಗೊಳಿಸಿದಾಗ ಖಾತೆಯಲ್ಲಿ ಇದ್ದ ಮೊತ್ತ ಮತ್ತು ಸದರಿ ಮೊತ್ತವನ್ನು ಯಾವ ಖಾತೆಗೆ ವರ್ಗಾಯಿಸಲಾಗಿರುತ್ತದೆ ಈ ಎಲ್ಲಾ ವಿವರಗಳನ್ನು ಸಲ್ಲಿಸಲು ಸೂಚಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್‌ಕುಮಾರ್ ರವರು ಮಾತನಾಡುತ್ತಾ ಬ್ಯಾಂಕ್ ಖಾತೆಗಳ ಕುರಿತು ಚರ್ಚಿಸಲು ಎಷ್ಟು ಸಭೆಗಳನ್ನು ನಡೆಸಲಾಗಿದೆ, ಈ ಬಗ್ಗೆ ಮಾಹಿತಿ ನೀಡುವಂತೆ ಹಾಜರಿದ್ದ ಮುಖ್ಯ ಲೆಕ್ಕಾಧಿಕಾರಿಯವರಿಗೆ ತಿಳಿಸಿದಾಗ, ಸದರಿಯವರು ಈ ಹಿಂದೆ ಹಲವಾರು ಬಾರಿ ಬ್ಯಾಂಕ್ ಖಾತೆಗಳ ವಿವರಗಳ ಕುರಿತಂತೆ ಚರ್ಚಿಸಲು ಕೇಂದ್ರ ಕಛೇರಿಯಲ್ಲಿ ಹಾಗೂ ವಲಯ ಮಟ್ಟದಲ್ಲಿ ಜಂಟಿ ಆಯುಕ್ತರರುಗಳು ಸಭೆಗಳನ್ನು ನಡೆಸಲಾಗಿರುತ್ತದೆಂದು ಮಾಹಿತಿ ನೀಡಿದಾಗ, ಸಭೆಯ ನಡವಳಿಗಳನ್ನು ಸಮಿತಿಗೆ ಸಲ್ಲಿಸಲು ತಿಳಿಸುತ್ತಾ, ಎಲ್ಲಾ ವಲಯಗಳಲ್ಲಿನ ಬ್ಯಾಂಕ್ ಖಾತೆಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ವಿವರಗಳನ್ನು ದೃಢೀಕರಿಸಿ ಸಮಿತಿಗೆ ದಿನಾಂಕ:15-09-2017ರ ಒಳಗೆ ಸಲ್ಲಿಸಲು ಸೂಚಿಸಿದರು.

1) To access exact No. of accounts
2) Total account re-conciliation
3) Bank statements, Bank balance
4) Account operator details
5) Type of accounts
6) Segregation of accounts
7) Purpose of Account

ಮುಂದುವರಿದು ಲೆಕ್ಕಪತ್ರಗಳ ಸಮರ್ಪಕ ನಿರ್ವಹಣೆ ಇಲ್ಲದೆ ದ್ವೈಮಾಸಿಕ ಅಂಕಿಅಂಶಗಳ ಪಟ್ಟಿಯನ್ನು ಸಲ್ಲಿಸಲು ಸಾಧ್ಯವಾಗುತ್ತಿರುವುದಿಲ್ಲ. ಈ ನಿಟ್ಟಿನಲ್ಲಿ ಲೆಕ್ಕಪತ್ರಗಳ ಸಮರ್ಪಕ ನಿರ್ವಹಣೆಯು ಅತ್ಯವಶ್ಯಕವಾಗಿದ್ದು, ಖರ್ಚು ವೆಚ್ಚಗಳ ವಿವರಗಳನ್ನು ಸರಿಯಾಗಿ ಸಲ್ಲಿಸಿದ್ದಲ್ಲಿ ಮಾತ್ರ ದ್ವೈಮಾಸಿಕ ಅಂಕಿಅಂಶಗಳ ಪಟ್ಟಿಯನ್ನು ಸಲ್ಲಿಸಲು ಸಾಧ್ಯವಾಗುತ್ತದೆಂದು ಸೂಚನೆ ನೀಡುತ್ತಾ, ಲೆಕ್ಕಪತ್ರ ವ್ಯವಸ್ಥೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣ ಮಾಡುವುದು ಅಗತ್ಯವೆಂದು ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಹಾಜರಿದ್ದ ಮುಖ್ಯ ಲೆಕ್ಕಾಧಿಕಾರಿಯವರಿಗೆ ತಿಳಿಸಿದರು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು

ನಂತರ ಸಹಾಯಕ ನಿಯಂತ್ರಕರು ಹಣಕಾಸು ರವರುಗಳು ವಲಯ ವ್ಯಾಪ್ತಿಯಲ್ಲಿ ಒಂದೇ ಬ್ಯಾಂಕ್ ಖಾತೆಯನ್ನು ನಿರ್ವಹಣೆ ಮಾಡಿದ್ದಲ್ಲಿ ಖರ್ಚು ವೆಚ್ಚಗಳ ನಿಖರವಾದ ಮಾಹಿತಿಗಳು ಲಭ್ಯವಾಗಲು ಸಾಧ್ಯವೆಂದು. ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದರು. ಆಗ ಅಧ್ಯಕ್ಷರು, ಈ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ನಂತರ ವಿದ್ಯಾ ಇಲಾಖೆಯ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರುಗಳ ತಮ್ಮ ವೈಯುಕ್ತಿಕ ಹೆಸರಿನಲ್ಲಿ ಬ್ಯಾಂಕ್ ಖಾತೆಗಳನ್ನು ನಿರ್ವಹಣೆ ಮಾಡುತ್ತಿದ್ದು, ಸದರಿ ಖಾತೆಗಳ ಬಗ್ಗೆ ಯಾವುದೇ ಸಮಗ್ರ ಮಾಹಿತಿಗಳು ಇರುವುದಿಲ್ಲವೆಂದು ತಿಳಿಸಿದಾಗ, ಸಹಾಯಕ ಆಯುಕ್ತರು (ಶಿಕ್ಷಣ) ರವರಿಗೆ ವಿದ್ಯಾ ಇಲಾಖೆಗೆ ಸಂಬಂಧಪಟ್ಟಂತೆ ನಿರ್ವಹಿಸುತ್ತಿರುವ ಬ್ಯಾಂಕ್ ಖಾತೆಗಳ ವಿವರಗಳನ್ನು ಬ್ಯಾಂಕ್ ಪಾಸ್‌ಶೀಟ್ ಸಮೇತ ಸಮಿತಿಗೆ ಸಲ್ಲಿಸಲು ತಿಳಿಸಿದರು.

ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಕರೆದಾಗ, ಗುತ್ತಿಗೆದಾರರು ಆಕ್ಸಿಸ್ ಬ್ಯಾಂಕ್‌ನಲ್ಲಿ ಇ.ಎಂ.ಡಿ. ಮೊತ್ತವನ್ನು ಠೇವಣಿ ಮಾಡುತ್ತಿದ್ದು, ಸದರಿ ಮೊತ್ತಕ್ಕೆ ಯಾವುದೇ ರೀತಿಯ ಬಡ್ಡಿಯನ್ನು ನೀಡುತ್ತಿರುವುದಿಲ್ಲವೆಂದು ತಿಳಿಸಿದಾಗ, ಎಲ್ಲಾ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳಿಂದ ಇ.ಎಂ.ಡಿ ಮೊತ್ತದ ವಿವರಗಳನ್ನು ಪಡೆದು ಸಮಿತಿಗೆ ಸಲ್ಲಿಸಲು ಸದಸ್ಯರಾದ ಗೌತಮ್ ಕುಮಾರ್ ರವರು ಸೂಚಿಸಿದರು.

ತದನಂತರ, ಆರೋಗ್ಯ ಇಲಾಖೆಗೆ ಸಂಬಂಧಪಟ್ಟಂತೆ ಲೆಕ್ಕ ವಿಭಾಗದ ನಿಖರವಾದ ಮಾಹಿತಿಗಳು ಲಭ್ಯವಿರುವುದಿಲ್ಲವೆಂದು ತಿಳಿಸಿದಾಗ, ಮುಖ್ಯ ಆರೋಗ್ಯಾಧಿಕಾರಿ ರವರಿಗೆ ಪತ್ರ ಬರೆದು ಮಾಹಿತಿಗಳನ್ನು ಪಡೆದುಕೊಳ್ಳುವಂತೆ ಮುಖ್ಯ ಲೆಕ್ಕಾಧಿಕಾರಿಯವರಿಗೆ ಅಧ್ಯಕ್ಷರು ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಮೇಲ್ಕಂಡ ಎಲ್ಲಾ ಮಾಹಿತಿಗಳನ್ನು ಮುಂದಿನ ಸಭೆಯ ದಿನಾಂಕದೊಳಗೆ ಸಲ್ಲಿಸಲು ಪಾಲಿಕೆಯ ಆರ್ಥಿಕ ಹಿತದೃಷ್ಟಿಯಿಂದ ಲೆಕ್ಕಪತ್ರಗಳ ನಿರ್ವಹಣೆಯನ್ನು ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸಬೇಕೆಂದು ಸೂಚಿಸುತ್ತಾ, ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

Methra Manya

**ಅಧ್ಯಕ್ಷರು**
**ಲೆಕ್ಕಪತ್ರ ಸ್ಥಾಯಿ ಸಮಿತಿ**

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಮುಖ್ಯ ಲೆಕ್ಕಾಧಿಕಾರಿಯವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ
6.ಕಛೇರಿ ಕಡತಕ್ಕೆ